**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **844** |
| **ಸದಸ್ಯರ ಹೆಸರು** | **ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **10.03.2026** |
| **ಉತ್ತರಿಸುವ ಸಚಿವರು** | **ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.** |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಲೈಸೆನ್ಸ್ ಪಡೆದಿರುವ ಸಣ್ಣ ಖನಿಜ ಗಣಿಗಳ (ಮರಳು, ಗ್ರಾನೈಟ್, ಕಲ್ಲುಕ್ವಾರಿ) ಸಂಖ್ಯೆ ಎಷ್ಟು;</td><td>
<ul><li>ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಕಟ್ಟಡ ಕಲ್ಲು, ಸಾಧಾರಣ ಮರಳು ಗಣಿಗಾರಿಕೆಗೆ ಒಟ್ಟು 04 ಸಂಖ್ಯೆಯ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ವಿವರ ಕೆಳಕಂಡಂತಿದೆ:</li></ul>
<table>
<tr><th>ಕ್ರ.ಸಂ.</th><th>ಖನಿಜದ ವಿಧ</th><th>ಗುತ್ತಿಗೆ/ಲೈಸೆನ್ಸ್ ಗಳ ಸಂಖ್ಯೆ</th></tr>
<tr><td>1</td><td>ಕಟ್ಟಡ ಕಲ್ಲು</td><td>01</td></tr>
<tr><td>2</td><td>ಸಾಧಾರಣ ಮರಳು</td><td>03</td></tr>
<tr><td colspan="2">ಒಟ್ಟು</td><td>04</td></tr>
</table>
<ul><li>ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅಲಂಕಾರಿಕ ಶಿಲೆ (ಗ್ರಾನೈಟ್) ಗಣಿಗಾರಿಕೆಗೆ ಯಾವುದೇ ಗುತ್ತಿಗೆಗಳನ್ನು ಮಂಜೂರು ಮಾಡಿರುವುದಿಲ್ಲ.</li></ul>
</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಲ್ಲಿ ಈ ಪ್ರದೇಶದಲ್ಲಿ ಗಣಿಗಾರಿಕೆಯಿಂದ ಸರ್ಕಾರಕ್ಕೆ ಬಂದಿರುವ ರಾಯಲ್ಟಿ ಆದಾಯ ಎಷ್ಟು;</td><td>
<ul><li>ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಉಪಖನಿಜಗಳ ಗಣಿಗಾರಿಕೆಯಿಂದ ಸಂಗ್ರಹವಾಗಿರುವ ರಾಜಧನದ ವಿವರ ಕೆಳಕಂಡಂತಿದೆ:</li></ul>
<table>
<tr><th>ಕ್ರ.ಸಂ.</th><th>ವರ್ಷ</th><th>ರಾಜಧನದ ಮೊತ್ತ (₹ಲಕ್ಷಗಳಲ್ಲಿ)</th></tr>
<tr><td>1</td><td>2022-23</td><td>36.06</td></tr>
<tr><td>2</td><td>2023-24</td><td>21.40</td></tr>
<tr><td>3</td><td>2024-25</td><td>35.36</td></tr>
<tr><td colspan="2">ಒಟ್ಟು</td><td>92.82</td></tr>
</table>
</td></tr>
<tr><td>ಇ)</td><td>ಅನಧಿಕೃತ ಗಣಿಗಾರಿಕೆ ಬಗ್ಗೆ ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ಅದರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)</td><td>
<ul>
<li>ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅನಧಿಕೃತ ಗಣಿಗಾರಿಕೆಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಒಟ್ಟು-04 ಸಂಖ್ಯೆಯ ದೂರುಗಳು ಸ್ವೀಕೃತವಾಗಿದ್ದು, ಸದರಿ ದೂರುಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ;</li>
<li>ದೂರುದಾರರಿಂದ ದೂರುಗಳು ಸ್ವೀಕೃತಗೊಂಡ ನಂತರ ಸಂಬಂಧಿಸಿದ ಇಲಾಖೆಗಳು ಹಾಗೂ ದೂರುದಾರರೊಂದಿಗೆ ಜಂಟಿ ಪರಿಶೀಲನೆ ಕೈಗೊಂಡು, ನಿಯಮಾನುಸಾರ ಕ್ರಮ ಕೈಗೊಂಡು. ದೂರುದಾರರಿಗೆ ಹಿಂಬರಹವನ್ನು ನೀಡಲಾಗಿದೆ.</li>
<li>ಮುಂದುವರೆದು ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅಕ್ರಮ ಗಣಿ ಚಟುವಟಿಕೆ ನಡೆಸುತ್ತಿದ್ದವರ ವಿರುದ್ಧ ಎಂ.ಎಂ.(ಡಿ&ಆರ್) ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು, ವಿವರ ಕೆಳಕಂಡಂತಿದೆ:</li>
</ul>
</td></tr>
</table>

. . . 2

(ದಂಡದ ಮೊತ್ತ ರೂ.ಲಕ್ಷಗಳಲ್ಲಿ)

| ವರ್ಷ | ಅನಧಿಕೃತ ಗಣಿಗಾರಿಕೆ | | | ಅನಧಿಕೃತ ಸಾಗಾಣಿಕೆ | | | ಅನಧಿಕೃತ ದಾಸ್ತಾನು | | |
|---|---|---|---|---|---|---|---|---|---|
| | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ ಮೊತ್ತ | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ ಮೊತ್ತ | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ ಮೊತ್ತ | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ |
| 2022-23 | 3 | 3.3 | 0 | 84 | 6.83 | 35 | 3 | 0 | 3 |
| 2023-24 | 2 | 0 | 2 | 142 | 16.11 | 80 | 4 | 1.55 | 3 |
| 2024-25 | 0 | 0 | 0 | 73 | 5.36 | 45 | 4 | 0 | 4 |
| **ಒಟ್ಟು** | 5 | 3.3 | 2 | **299** | **28.30** | **160** | **11** | **1.55** | **10** |

| | | |
|---|---|---|
| ಈ) | ಗಣಿಗಾರಿಕೆಯಿಂದ ಪರಿಸರದ ಮೇಲೆ ಉಂಟಾಗುತ್ತಿರುವ ಪರಿಣಾಮಗಳನ್ನು ತಗ್ಗಿಸಲು ಸರ್ಕಾರ ಕೈಗೊಂಡಿರುವ ಪರಿಸರ ಸಂರಕ್ಷಣಾ ಕ್ರಮಗಳೇನು? | • ಗಣಿಗಾರಿಕೆಯಿಂದ ಪರಿಸರಕ್ಕೆ ಉಂಟಾಗುವ ಆಘಾತವನ್ನು ತಡೆಗಟ್ಟಿ ವ್ಯವಸ್ಥಿತ ಮತ್ತು ವೈಜ್ಞಾನಿಕವಾಗಿ ಗಣಿಗಾರಿಕೆ ಮಾಡುವ ಸಂಬಂಧ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆಯುವುದನ್ನು ಕಾಯ್ದೆ/ ನಿಯಮಗಳಲ್ಲಿ ಕಡ್ಡಾಯಗೊಳಿಸಲಾಗಿದೆ.<br>• ಉಪ ಖನಿಜಗಳ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲು ಕಡ್ಡಾಯವಾಗಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-8(5) ರಂತೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣೆ ಪತ್ರಗಳು, ಅನುಮೋದಿತ ಕ್ವಾರಿಯಿಂಗ್ ಪ್ಲಾನ್, ಪರಿಸರ ನಿರ್ವಹಣೆ ಯೋಜನೆ, ಮೈನ್ ಕ್ಲೋಷರ್ ಪ್ಲಾನ್ ಹಾಗೂ ರಾಜ್ಯ ಪರಿಸರ ಅಘಾತ ಅಂದಾಜೀಕರಣ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆದ ನಂತರ ಗಣಿಗಾರಿಕೆಗೆ ಅನುಮತಿ ನೀಡಲಾಗುತ್ತದೆ. . |

ಸಂಖ್ಯೆ:ಸಿಐ-ಎಂಎಂಎಂ/99/2026

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.